# ಅಬುಧಾಬಿಯ ದೊರೆ ಭಾರತಕ್ಕೆ ಭೇಟಿ (ಸೆಪ್ಟೆಂಬರ್ 9-10,2024)

ಸೆಪ್ಟೆಂಬರ್ 07, 2024

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರ ಆಹ್ವಾನದ ಮೇರೆಗೆ, ಅಬುಧಾಬಿಯ ದೊರೆ, ಗೌರವಾನ್ವಿತ ಶೇಖ್ ಖಲೀದ್ ಬಿನ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರು 2024ರ ಸೆಪ್ಟೆಂಬರ್ 9-10ರಂದು ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ. ಅಬುಧಾಬಿಯ ದೊರೆ ಆದ ಬಳಿಕ ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿಯಾಗಿದೆ. ಯುಎಇ ಸರ್ಕಾರದ ಹಲವಾರು ಸಚಿವರು ಮತ್ತು ವ್ಯಾಪಾರ ನಿಯೋಗ ಅವರೊಂದಿಗೆ ಇರಲಿದೆ.

2. ಸೆಪ್ಟೆಂಬರ್ 9 ರಂದು, ಅಬುಧಾಬಿಯ ದೊರೆಯು ಪ್ರಧಾನ ಮಂತ್ರಿಯನ್ನು ಭೇಟಿ ಮಾಡುತ್ತಾರೆ ಮತ್ತು ದ್ವಿಪಕ್ಷೀಯ ಸಹಕಾರದ ಹಲವು ಕ್ಷೇತ್ರಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಅವರು ಭಾರತದ ರಾಷ್ಟ್ರಪತಿಯವರನ್ನೂ ಭೇಟಿ ಮಾಡಲು ನಿರ್ಧರಿಸಿದ್ದಾರೆ. ಅದರೊಂದಿಗೆ ರಾಜ್‌ಘಾಟ್‌ಗೆ ಭೇಟಿ ನೀಡಿ ಮಹಾತ್ಮ ಗಾಂಧಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಿದ್ದಾರೆ.

3. ಸೆಪ್ಟೆಂಬರ್ 10 ರಂದು, ಉಭಯ ದೇಶಗಳ ವ್ಯಾಪಾರದ ಮುಖ್ಯಸ್ಥರು ಭಾಗವಹಿಸುವ ವ್ಯಾಪಾರ ವೇದಿಕೆಯಲ್ಲಿ ಪಾಲ್ಗೊಳ್ಳಲು ಮುಂಬೈಗೆ ಭೇಟಿ ನೀಡಲಿದ್ದಾರೆ.

4. ಭಾರತ ಮತ್ತು ಯುಎಇ ಐತಿಹಾಸಿಕವಾಗಿ ನಿಕಟ ಸ್ನೇಹ ಸಂಬಂಧಗಳನ್ನು ಹಂಚಿಕೊಳ್ಳುತ್ತವೆ. ಇತ್ತೀಚಿನ ವರ್ಷಗಳಲ್ಲಿ, ಭಾರತ ಮತ್ತು ಯುಎಇ ನಡುವಿನ ರಾಜಕೀಯ, ವ್ಯಾಪಾರ, ಹೂಡಿಕೆ, ಸಂಪರ್ಕ, ಶಕ್ತಿ, ತಂತ್ರಜ್ಞಾನ, ಶಿಕ್ಷಣ ಮತ್ತು ಸಂಸ್ಕೃತಿ ಸೇರಿದಂತೆ ಸಮಗ್ರ ಕಾರ್ಯತಂತ್ರದ ಸಹಭಾಗಿತ್ವದ ಕ್ಷೇತ್ರಗಳಲ್ಲಿ ಉತ್ತಮ ಸಂಬಂಧ ಬೆಳೆದುಬಂದಿದೆ. ದೊರೆ ಅವರ ಭೇಟಿಯು ಭಾರತ-ಯುಎಇ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುತ್ತದೆ. ಅದರೊಂದಿಗೆ ಹೊಸ ಮತ್ತು ಉದಯೋನ್ಮುಖ ಪ್ರದೇಶಗಳಲ್ಲಿ ಪಾಲುದಾರಿಕೆಗೆ ಮುಕ್ತ ಅವಕಾಶಗಳನ್ನು ನೀಡುತ್ತದೆ.

**ನವದೆಹಲಿ**
**ಸೆಪ್ಟೆಂಬರ್ 07, 2024**